ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.

# ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 1015/2021 .

ಪ್ರಾ.ಸಾ. : 2
ಚಾ.ಸಾ. : 2

| | | |
|---|---|---|
| ಹೆಸರು | : | ಬೋಪಯ್ಯ |
| ತಂದೆಯ ಹೆಸರು | : | ಬೆಳ್ಳಿಯಪ್ಪ |
| ವಯಸ್ಸು | : | 77 ವರ್ಷ |
| ಉದ್ಯೋಗ | : | -------- |
| ವಿಳಾಸ | : | ಶ್ರೀಮಂಗಲ |

... ............................................................................................................ ...

ದಿನಾಂಕ 03 ನೇ ಜುಲೈ 2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ- ಮಾನ್ಯ ಸ ಸ ಅ ರವರಿಂದ :-

ಚಾಸಾ 3 ಮತ್ತು 4 ಪರಿಚಯ. ಈಗ ತೋರಿಸಿದ ದಾಖಲೆಯಲ್ಲಿ ನನ್ನ ಸಹಿ ಇದೆ, ಸಾಕ್ಷಿಯು ಗುರುತಿಸಿರುವ ದಾಖಲೆಯು ಸ್ಥಳ ಪಂಚನಾಮೆ ಆಗಿದ್ದು ಅದನ್ನು ನಿ ಪಿ 5 ಎಂದು, ಸಾಕ್ಷಿಯ ಸಹಿ ನಿ ಪಿ 5 ಎ ಎಂದು ಗುರುತಿಸಲಾಯಿತು. ನಿ ಪಿ 5 ರ ವಿಚಾರ ಗೊತ್ತಿಲ್ಲ. ಶ್ರೀಮಂಗಲ ಪೊಲೀಸ್ ಠಾಣೆಯಲ್ಲಿ ನಿ ಪಿ 5 ಕ್ಕೆ ಸಹಿ ಮಾಡಿದ್ದೇನೆ. ಪೊಲೀಸರಿಗೆ ನಾನು ಹೇಳಿಕೆ ನೀಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ, ನಾನು ಪೊಲಿಸರಿಗೆ ಯಾವುದೇ ಕೃತ್ಯ ಸ್ಥಳವನ್ನು ತೋರಿಸಿಲ್ಲ, ಏನನ್ನೂ ಅಮಾನತ್ತುಪಡಿಸಿಕೊಂಡಿಲ್ಲ. ಫೋಟೋವನ್ನು ನಿಪಿ 6 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಹಾಗೂ ಸ.ಸ.ಅ.ರವರ ವಾದವನ್ನು ಆಲಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

ಪಾಟೀ ಸವಾಲು: - ಮಾನ್ಯ ಸ.ಸ ಅ ರವರಿಂದ : -

ಸಂಜು ಎಂಬ ವ್ಯಕ್ತಿ ಅಕ್ರಮವಾಗಿತನ್ನನ್ನು J.E. ಗೆ ಕಳುಹಿಸಿದ್ದಾರೆ ಎಂದು ಹೇಳಿ ಹಣ ವಸೂಲಿ ಮಾಡಿದ್ದಾರೆ ಎಂಬ ವಿಚಾರವಾಗಿ ನಾನು ಚಾಸಾ 1 ರವರಿಗೆ ದೂರವಾಣಿ ಕರೆ ಮಾಡಿ ತಿಳಿಸಿದ್ದೇನೆ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ದಿ. 27.06.2021 ರಂದು ಪೊಲೀಸರು ನಮ್ಮ ಮನೆ ಬಳಿ ಬಂದಿದ್ದರು ಎಂದರೆ ಸರಿಯಲ್ಲ. ಮಹಜರ್ ಅನ್ನು ನನ್ನ ಸಮಕ್ಷಮ ಮಾಡಿದರು ಎಂದರೆ ಸರಿಯಲ್ಲ. ನಾನು ಸಂಜು ಎನ್ನುವವರಿಗೆ 200 ರೂ ಕೊಟ್ಟಿರುವುದಾಗಿ ತಿಳಿಸಿದ್ದೇನೆ ಎಂದರೆ ಸರಿಯಲ್ಲ. ಈಗ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯೊಂದಿಗೆ ಪ್ರಕರಣ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ನಿರಾಕರಿಸಿದ ಹೇಳಿಕೆಯನ್ನು ನಿಪಿ 7 ಎಂದು ಗುರುತಿಸಲಾಯಿತು.

ಪಾಟೀ ಸವಾಲು :- ಆರೋಪಿ ಪರ ವಕೀಲರವರಿಂದ :-

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ :- - ಇಲ್ಲ -

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

Sd/xxx-
ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.

(ಸಾಕ್ಷಿಯವರ ಸಹಿ)